ಶ್ರೀ ಕಾಗೋಡು ತಿಮ್ಮಪ್ಪ (ಸಮಾಜ ಕಲ್ಯಾಣ ಸಚಿವರು) :

ಅ) ನರಗುಂದ ವಿಧಾನ ಸಭಾ ಕ್ಷೇತ್ರದಲ್ಲಿ ಮೆಟ್ರಿಕ್-ಪೂರ್ವ ಮತ್ತು ಮೆಟ್ರಿಕ್-ನಂತರದ ವಿದ್ಯಾರ್ಥಿನಿಲಯಗಳ ವಿವರ ಈ ಕೆಳಕಂಡಂತೆ ಇರುತ್ತದೆ:

ಇಲಾಖೆ	ಮೆಟ್ರಿಕ್ ಪೂರ್ವ	ಮೆಟ್ರಿಕ್ ನಂತರ
1. ಹಿಂದುಳಿದ ವರ್ಗಗಳ ಇಲಾಖೆ	3	-
2. ಸಮಾಜ ಕಲ್ಯಾಣ ಇಲಾಖೆ	2	-
3. ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ	-	-

ಆ) ಮೂರು ವಿದ್ಯಾರ್ಥಿನಿಲಯಗಳಿಗೆ ಸ್ವಂತ ಕಟ್ಟಡವಿರುತ್ತದೆ.

ಇ) ಹೌದು, ಹೊಸ ವಿದ್ಯಾರ್ಥಿನಿಲಯಗಳ ಪ್ರಾರಂಭಕ್ಕೆ ಒದಗಿಸಬಹುದಾದ ಆಯವ್ಯಯದ ಮೇರೆಗೆ ಹೊಸ ವಿದ್ಯಾರ್ಥಿನಿಲಯಗಳನ್ನು ಹಂತ ಹಂತವಾಗಿ ಪ್ರಾರಂಭಿಸಲಾಗುವುದು.

ಅಧ್ಯಕ್ಷರು : ಮಂಡಿಸಲಾಯಿತು

2. ಸಭೆಯ ಮುಂದಿಡಲಾದ ಕಾಗದ ಪತ್ರಗಳು

ಶ್ರೀ ಡಿ.ಬಿ. ಚಂದ್ರೇಗೌಡ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) : (ಮುಖ್ಯಮಂತ್ರಿಗಳ ಪರವಾಗಿ) ಭಾರತ ಸಂವಿಧಾನ 151(2)ನೇ ಅನುಚ್ಛೇದದ ಮೇರೆಗೆ ದಿನಾಂಕ 31ನೇ ಮಾರ್ಚ್ 2000ದ ಅಂತ್ಯದವರೆಗಿನ 1999-2000ನೇ ಸಾಲಿನ ಧನ ವಿನಿಯೋಗ ಲೆಕ್ಕಪತ್ರಗಳು ಹಾಗೂ ಹಣಕಾಸು ಲೆಕ್ಕಪತ್ರಗಳನ್ನು ಸಭೆಯ ಮುಂದಿಡುತ್ತಿದ್ದೇನೆ.

ಅಧ್ಯಕ್ಷರು : ಮಂಡಿಸಲಾಯಿತು.

3. ವರದಿಯನ್ನೊಪ್ಪಿಸುವುದು

ಶ್ರೀ ಬಿ.ಆರ್. ನೀಲಕಂಠಪ್ಪ (ಅಧ್ಯಕ್ಷರು, ಸಭೆಯ ಮುಂದಿಡಲಾದ ಕಾಗದ ಪತ್ರಗಳ ಸಮಿತಿ) ಮಾನ್ಯ ಅಧ್ಯಕ್ಷರೆ, ನಾನು ಸಭೆಯ ಮುಂದಿಡಲಾದ ಕಾಗದ ಪತ್ರಗಳ ಸಮಿತಿಯ ಹತ್ತೊಂಭತ್ತನೇ ವರದಿಯನ್ನು ಸಭೆಗೆ ಒಪ್ಪಿಸುತ್ತೇನೆ.

ಅಧ್ಯಕ್ಷರು : ವರದಿಯನ್ನೊಪ್ಪಿಸಲಾಯಿತು.

4. ಅಧ್ಯಕ್ಷರ ಅಪ್ಪಣೆ ಮೇರೆಗೆ

ಅ. ವರದಿಗಳು ಇಂಗ್ಲಿಷ್‌ನಲ್ಲಿ ಬರುತ್ತಿರುವುದು